# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1032 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪಿ. ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 24.02.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಜಾತಿ ಪಟ್ಟಿಯನ್ವಯ ರಾಜಸ್ಥಾನದಲ್ಲಿ ಅನ್ವಯಿಸುವ ಹಿಂದುಳಿದ ವರ್ಗಗಳಿಗೆ ಸೇರಿದ ಸೀರವಿ (SEERAVI) ಜಾತಿಯನ್ನು ರಾಜ್ಯದ ಯಾವ ಜಾತಿಗಳ ಪಟ್ಟಿಗೆ ಸೇರಿಸಲಾಗಿದೆ; (ಸಂಪೂರ್ಣ ಮಾಹಿತಿಯನ್ನು ನೀಡುವುದು). | ಸೀರವಿ (SEERAVI) ಜಾತಿಯು ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಮೀಸಲಾತಿ ಜಾತಿಪಟ್ಟಿಗೆ ಸೇರಿರುವುದಿಲ್ಲ. |
| ಆ) | ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಸೀರವಿ (SEERAVI) ಜನಾಂಗದವರನ್ನು ರಾಜ್ಯದ ಜಾತಿಗಳ ಪಟ್ಟಿಯಲ್ಲಿ ಸೇರಿಸಿ, ರಾಜ್ಯ ಪತ್ರದ ಗೆಜೆಟ್ ನಲ್ಲಿ ನಮೂದು ಮಾಡುವಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆ ಹಾಗೂ ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ, ಹಿಂದುಳಿದ ವರ್ಗಗಳ ಆಯೋಗದಿಂದ ಸರ್ಕಾಕ್ಕೆ 2005 ರಲ್ಲಿ ಮಾಡಿರುವ ಶಿಫಾರಸ್ಸು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಸರ್ಕಾರದಿಂದ ತೆಗೆದುಕೊಂಡಿರುವ ಕ್ರಮಗಳ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು. | ಶ್ರೀ ಎಸ್. ಸಿದ್ಧಗಂಗಯ್ಯ, ಅಧ್ಯಕ್ಷತೆಯಲ್ಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಮಧ್ಯಂತರ ವರದಿ-2005ನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿ ವರದಿಯ ಸಲಹೆ ಸಂಖ್ಯೆ:22-2005ರಲ್ಲಿ ಸಿರ್ವಿ (ಚೌಧರಿ) ಜಾತಿಯನ್ನು ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಗೆ ಸೇರಿಸುವ ಸಂಬಂಧದಲ್ಲಿ ಈ ಕೆಳಕಂಡಂತೆ ಸಲಹೆಯನ್ನು ನೀಡಿರುತ್ತದೆ.<br><br>"ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಅಧಿನಿಯಮ 1995 ಪರಿಚ್ಛೇಧ 9(1) ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ **ಸಿರ್ವಿ (ಚೌಧರಿ)** ಜಾತಿಯ ಮನವಿಯನ್ನು ತಿರಸ್ಕರಿಸಲು ಸರ್ಕಾರಕ್ಕೆ ಆಯೋಗವು ಸಲಹೆ ನೀಡಿದೆ". |
| ಇ) | ಹಿಂದುಳಿದ ವರ್ಗಗಳಿಗೆ ಸೇರಿದ ಸೀರವಿ (SEERAVI) ಜನಾಂಗದ ಮಕ್ಕಳ ಶೈಕ್ಷಣಿಕ ಔದ್ಯೋಗಿಕ ಹಾಗೂ ಸರ್ಕಾರದ ಇತರೆ ಸೌಲಭ್ಯಗಳನ್ನು ಪಡೆಯಲು ರಾಜ್ಯ ಸರ್ಕಾರದಿಂದ ಜಾತಿ ಪ್ರಮಾಣ ಪತ್ರವನ್ನು ವಿತರಿಸಲು ಕೈಗೊಂಡಿರುವ ಕ್ರಮಗಳೇನು? (ಮಾಹಿತಿಯನ್ನು ಒದಗಿಸುವುದು) | ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರ ಆದೇಶದಂತೆ ಸೀರವಿ (SEERAVI) ಜಾತಿಯು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾತಿ ಮೀಸಲಾತಿ ಪಟ್ಟಿಯಲ್ಲಿ ಸೇರದೇ ಇರುವುದರಿಂದ ಸದರಿ ಜನಾಂಗದವರು ಜಾತಿ ಪ್ರಮಾಣ ಪತ್ರವನ್ನು ಪಡೆಯಲು ಅರ್ಹರಿರುವುದಿಲ್ಲ. |

ಸಂಖ್ಯೆ: ಹಿಂವಕ 81 ಬಿಸಿಎ 2023

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು